Akashvani: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

12.08.2025 14.30hrs

*******

ಮುಖ್ಯಾಂಶಗಳು:

- ಸಚಿವ ಸ್ಥಾನದಿಂದ ಕೆ.ಎನ್. ರಾಜಣ್ಣ ಪದಚ್ಯುತಿಗೆ ಸೂಕ್ತ ಕಾರಣ ನೀಡುವಂತೆ ವಿಧಾನಸಭೆಯಲ್ಲಿಂದು ಬಿಜೆಪಿ ಪಟ್ಟು; ಸರ್ಕಾರದಿಂದ ಉತ್ತರದ ಭರವಸೆ
- ನೇಕಾರರ ಹಿತರಕ್ಷಣೆಗಾಗಿ ನೂತನ ಜವಳಿ ನೀತಿ ರೂಪಿಸಲು ಸರ್ಕಾರದ ಚಿಂತನೆ - ಜವಳಿ ಖಾತೆ ಸಚಿವ ಶಿವಾನಂದ ಪಾಟೀಲ್
- ಇಂದು ವಿಶ್ವ ಗಜ ದಿನ; ಮೈಸೂರಿನಲ್ಲಿ ದಸರಾ ಆನೆಗಳಿಂದ ಗಜ ತಾಲೀಮು ಆರಂಭ
- ಮಹಾರಾಜ ಟ್ರೋಫಿ ಟಿ-೨೦ ಕ್ರಿಕೆಟ್; ಹುಬ್ಬಳ್ಳಿ ಟೈಗರ್ಸ್-ಶಿವಮೊಗ್ಗ ಲಯನ್ಸ್ ಹಾಗೂ ಮೈಸೂರು ವಾರಿಯರ್ಸ್ - ಗುಲ್ಬರ್ಗಾ ಮಿಸ್ಟಿಕ್ಸ್ ಮುಖಾಮುಖಿ

**********

ಸಚಿವ ಸ್ಥಾನದಿಂದ ಕೆ.ಎನ್. ರಾಜಣ್ಣ ಅವರ ಪದಚ್ಯುತಿಗೆ ಸೂಕ್ತ ಕಾರಣ ನೀಡಬೇಕೆಂದು ವಿಧಾನಸಭೆಯಲ್ಲಿಂದು ಪ್ರತಿಪಕ್ಷ ಬಿಜೆಪಿ ಪಟ್ಟು ಹಿಡಿದಿದ್ದರಿಂದ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಯಿತು. ಕಲಾಪದ ಆರಂಭದಲ್ಲಿ ವಿರೋಧ ಪಕ್ಷದ ನಾಯಕ ಆರ್.ಅಶೋಕ ಸಚಿವ ರಾಜಣ್ಣ ಅವರ ಪದಚ್ಯುತಿಯನ್ನು ಪ್ರಸ್ತಾಪಿಸಿದರು. ವಿಧಾನಮಂಡಲ ಅಧಿವೇಶನ ನಡೆಯುತ್ತಿದೆ, ಸಚಿವರನ್ನು ಕೈಬಿಟ್ಟಿರುವ ಬಗ್ಗೆ ನಾವು ಮಾಧ್ಯಮಗಳಿಂದ ತಿಳಿದುಕೊಳ್ಳಬೇಕೆ ಸದನಕ್ಕೆ ಮಾಹಿತಿ ನೀಡುವುದು ಸರ್ಕಾರದ ಜವಾಬ್ದಾರಿ ಎಂದು ಆರ್.ಅಶೋಕ ಹೇಳಿದರು. ಈ ಸಂದರ್ಭದಲ್ಲಿ ಸಭಾಧ್ಯಕ್ಷ ಯು.ಟಿ. ಖಾದರ್, ಆಂತರಿಕ ವಿಚಾರವನ್ನು ಚರ್ಚೆ ಮಾಡುವುದು ಅನಗತ್ಯ ಎಂದಾಗ ವಿರೋಧ ಪಕ್ಷದ ಸುರೇಶ್ ಕುಮಾರ್ ಹಾಗೂ ಸುನೀಲ್ ಕುಮಾರ್ ಆಕ್ಷೇಪ ವ್ಯಕ್ತಪಡಿಸಿದರು. ವಿರೋಧ ಪಕ್ಷದ ನಾಯಕ ಆರ್. ಅಶೋಕ ರಾಜಣ್ಣ ಅವರ ಬಗ್ಗೆ ಸರ್ಕಾರ ನಿನ್ನೆಯೇ ಹೇಳಿಕೆ ನೀಡಬೇಕಾಗಿತ್ತು. ರಾಹುಲ್ ಗಾಂಧಿ ಮತಗಳ್ಳತನ ಆರೋಪ ಮಾಡಿದ್ದರು. ರಾಜಣ್ಣ ಅವರು ಮತಗಳ್ಳತನವಾಗಿಲ್ಲ ಎಂದು ಜನರಿಗೆ ಸತ್ಯ ಹೇಳಿದ್ದರು. ಈ ಹಿನ್ನೆಲೆಯಲ್ಲಿ ರಾಜಣ್ಣ ಅವರನ್ನು ಸಂಪುಟದಿಂದ ವಜಾಗೊಳಿಸಿರುವ ಕಾರಣ ತಿಳಿಸಬೇಕೆಂದು ಒತ್ತಾಯಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷರೂ ಆಗಿರುವ ಬಿ.ವೈ. ವಿಜಯೇಂದ್ರ, ರಾಹುಲ್ ಗಾಂಧಿ ಬೆಂಗಳೂರಿಗೆ ಬಂದು ಮತಗಳ್ಳತನವಾಗಿದೆ ಎಂದು ಪ್ರತಿಭಟನೆ ನಡೆಸಿದ್ದಾರೆ. ಇದು ಆಂತರಿಕ ವಿಚಾರವಲ್ಲ, ಸದನಕ್ಕೆ ವಿಷಯ ತಿಳಿಯಬೇಕು ಎಂದು ಆಗ್ರಹಪಡಿಸಿದರು. ಕಾನೂನು ಮತ್ತು ಸಂಸದೀಯ

ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್, ಸಭಾಧ್ಯಕ್ಷರ ಆಶಯದಂತೆ ಮೊದಲು ಪ್ರಶ್ನೋತ್ತರದ ಕಲಾಪ ನಡೆಯಲಿ, ಆ ಬಳಿಕ ಸರ್ಕಾರ ತನ್ನ ಉತ್ತರ ನೀಡಲಿದೆ ಎಂದು ಸ್ಪಷ್ಟಪಡಿಸಿದರು. ಅಲ್ಲಿಗೆ ಚರ್ಚೆ ತಾತ್ಕಲಿಕವಾಗಿ ಸ್ಥಗಿತಗೊಂಡು ಪ್ರಶ್ನೋತ್ತರ ಕಲಾಪದತ್ತ ಮರಳಿತು.

**********

ನೇಕಾರರ ಹಿತರಕ್ಷಣೆ ಮಾಡುವ ಉದ್ದೇಶದಿಂದ ನೂತನ ಜವಳಿ ನೀತಿ ರೂಪಿಸಲು ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ಜವಳಿ ಮತ್ತು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ವಿಧಾನ ಪರಿಷತ್‌ನಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಕೇಶವ ಪ್ರಸಾದ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ನೂತನ ಜವಳಿ ನೀತಿಗೆ ಅಂತಿಮ ರೂಪ ನೀಡುವ ಮುನ್ನ ನೇಕಾರರ ಬಗ್ಗೆ ಕಳಕಳಿ ಇರುವ ಸದನದ ಸದಸ್ಯರು ಹಾಗೂ ನೇಕಾರರ ಪ್ರತಿನಿಧಿಗಳನ್ನು ಕರೆದು ಚರ್ಚಿಸಲಾಗುವುದು ಎಂದು ಭರವಸೆ ನೀಡಿದರು. ವಿದ್ಯುತ್ ಮಗ್ಗಗಳು ಬಂದ ನಂತರ ಕೈಮಗ್ಗ ನೇಕಾರರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಅವರ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ನೆರವು ನೀಡುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆ ಎಂದು ಹೇಳಿದರು. ನೇಕಾರರ ಸಮ್ಮಾನ್ ಯೋಜನೆಯಡಿ ಕಷ್ಟದಲ್ಲಿ ಇರುವ ನೇಕಾರರಿಗೆ ವಾರ್ಷಿಕ ಐದು ಸಾವಿರ ರೂಪಾಯಿ ನೆರವು ನೀಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು. ನೇಕಾರಿಕೆ ಉದ್ದಿಮೆ ಪ್ರಾರಂಭ ಮಾಡುವ ನಿರುದ್ಯೋಗಿ ಯುವಸಮುದಾಯದವರಿಗೆ ಧನಸಹಾಯ ಸೇರಿದಂತೆ ಹಲವು ರೀತಿಯ ಸೌಲಭ್ಯಗಳನ್ನು ಕಲ್ಪಿಸಲಾಗುತ್ತದೆ ಎಂದು ಸ್ಪಷ್ಟಪಡಿಸಿದರು.

**********

ರಾಜ್ಯದೆಲ್ಲೆಡೆ ಖಾಸಗಿ ಬಡಾವಣೆಗಳಲ್ಲಿ ನಿವೇಶನ ಖರೀದಿ ಮಾಡಿ ನೋಂದಣಿ ಮಾಡಿಕೊಂಡ ಮಾಲೀಕರಿಗೆ ಬಿ-ಖಾತಾ ನೀಡಲಾಗುತ್ತಿದ್ದು, ಶೀಘ್ರವೇ ಎ-ಖಾತಾ ನೀಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ ಎಂದು ನಗರಾಭಿವೃದ್ಧಿ ಸಚಿವ ಬಿ.ಎಸ್. ಸುರೇಶ್ ಮೇಲ್ಮನೆಗೆ ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿಂದು ಹಲವು ಸದಸ್ಯರು ಪ್ರಶ್ನೆಗಳಿಗೆ ಉತ್ತರ ನೀಡಿದ ಸಚಿವರು, ಖಾಸಗಿ ಬಡಾವಣೆ ಗಳಲ್ಲಿ ನಿವೇಶನ ಖರೀದಿ ಮಾಡಿ ಯಾವುದೇ ಅಧಿಕೃತ ದಾಖಲೆಗಳಿಲ್ಲದೆ ಪರದಾಡುತ್ತಿದ್ದ ಮಾಲೀಕರಿಗೆ ಸರ್ಕಾರದ ದಾಖಲೆ ಒದಗಿಸುವ ಉದ್ದೇಶದಿಂದ ಬಿ ಮತ್ತು ಇ-ಖಾತೆಗಳನ್ನು ನೀಡುವ ಪ್ರಕ್ರಿಯೆ ಪ್ರಾರಂಭಿಸಿದೆ. ಮುಂಬರುವ ದಿನಗಳಲ್ಲಿ ಇಂತಹ ನಿವೇಶನ ಮಾಲೀಕರಿಗೆ ಎ-ಖಾತಾ ನೀಡಲಾಗುವುದು ಎಂದು ಸ್ಪಷ್ಟಪಡಿಸಿದರು.

**********

ಗ್ಯಾರಂಟಿ ಅನುಷ್ಠಾನ ಸಮಿತಿಯ ರಾಜ್ಯ ಉಪಾಧ್ಯಕ್ಷರನ್ನಾಗಿ ವಿಧಾನ ಪರಿಷತ್ ಶಾಸಕ ದಿನೇಶ್ ಗೂಳಿಗೌಡ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಪ್ರಸ್ತುತ ದಿನೇಶ್

ಗೂಳಿಗೌಡ ಅವರು ಮಂಡ್ಯ ಸ್ಥಳೀಯ ಸಂಸ್ಥೆಗಳ ಕ್ಷೇತ್ರಗಳಿಂದ ವಿಧಾನಪರಿಷತ್ತಿನ ಶಾಸಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

**********

ಕೊಡಗು ಜಿಲ್ಲೆಯಲ್ಲಿ ಸಿ ಮತ್ತು ಡಿ ಕೃಷಿ ಭೂಮಿ ಹಕ್ಕಿಗಾಗಿ ಒತ್ತಾಯಿಸಿ ರೈತ ಸಂಘಟನೆಗಳು ಇಂದು ಕರೆ ನೀಡಿದ್ದ ಸೋಮವಾರಪೇಟೆ ತಾಲೂಕು ಬಂದ್‌ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ತಾಲೂಕಿನಾದ್ಯಂತ ಖಾಸಗಿ ಬಸ್ ಮತ್ತು ಆಟೋ ಟ್ಯಾಕ್ಸಿ ಗಳ ಸಂಚಾರ ಸ್ಥಗಿತಗೊಂಡಿದೆ.

ಶನಿವಾರ ಸಂತೆ ಮತ್ತು ಕೊಡ್ಲಿಪೇಟೆ ನಲ್ಲೂ ತಾಲ್ಲೂಕು ಬಂದ್ ಗೆ ಉತ್ತಮ ಪ್ರತಿಕ್ರಿಯೆ ದೊರೆತಿದೆ. ಕಾಂಗ್ರೆಸ್ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳು ರೈತ ಸಂಘಟನೆಗಳೊಂದಿಗೆ ಬಂದ್‌ಗೆ ಕರೆ ನೀಡಿದ್ದವು.

**********

ಭೂಮಿಯ ಮೇಲಿನ ಅತ್ಯಂತ ಭವ್ಯ ಜೀವಿಗಳನ್ನು ರಕ್ಷಿಸುವ ಮತ್ತು ಸಂರಕ್ಷಿಸಲು ಪ್ರತಿ ವರ್ಷ ಆಗಸ್ಟ್ ೧೨ ರಂದು ವಿಶ್ವ ಆನೆ ದಿನವನ್ನು ಆಚರಿಸಲಾಗುತ್ತದೆ.ಆನೆಗಳು ಸಾಮಾನ್ಯವಾಗಿ ಬುದ್ಧಿವಂತಿಕೆ, ಶಕ್ತಿ ಮತ್ತು ಸಮತೋಲನದ ಸೂಚಕಗಳಾಗಿವೆ. ಕಾಡಾನೆಗಳ ಸಂಖ್ಯೆಯಲ್ಲಿ ಸುಮಾರು ಶೇಕಡ ೬೦ರಷ್ಟು ಕಾಡಾನೆಗಳಿಗೆ ಭಾರತ ನೆಲೆಯಾಗಿದೆ. ರಾಜ್ಯದಲ್ಲಿ ಸುಮಾರು ೬ ಸಾವಿರದ ೩೯೫ ವನ್ಯಜೀವಿ ಆನೆಗಳಿದ್ದು, ಇವುಗಳ ಮುಕ್ತ ಸಂಚಾರಕ್ಕೆ ಅವಕಾಶವಾಗುವಂತೆ ಪರಿಸರ ಕಾಪಾಡಿಕೊಂಡು ಬರಲು ಅರಣ್ಯ ಇಲಾಖೆ ಭಾರತೀಯ ವಿಜ್ಞಾನ ಸಂಸ್ಥೆಯೊಂದಿಗೆ ತಿಳಿವಳಿಕೆಯೊಂದಕ್ಕೆ ಸಹಿ ಹಾಕಿದೆ. ವನ್ಯಜೀವಿ ಮಾನವ ಸಂಘರ್ಷವಾಗದಂತೆ ಭೂಪರಿಸರ ಮಟ್ಟದ ನಿರ್ವಹಣೆಗಾಗಿ ಈ ಉಪಕ್ರಮ ಕೈಗೊಳ್ಳಲಾಗಿದ್ದು, ಮುಂದಿನ ೫ ವರ್ಷಗಳ ಅವಧಿಯಲ್ಲಿ ಸುಮಾರು ೪ ಕೋಟಿ ೭೪ ಲಕ್ಷ ರೂಪಾಯಿ ವೆಚ್ಚದಲ್ಲಿ ವಿವಿಧ ನೈಜಕಾಲ ದತ್ತಾಂಶ ಪಡೆಯಲು ಉದ್ದೇಶಿಸಲಾಗಿದೆ.

**********

ವಿಶ್ವವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವದ ಹಿನ್ನಲೆಯಲ್ಲಿ ಮೈಸೂರಿಗೆ ಆಗಮಿಸಿರುವ ದಸರಾ ಗಜಪಡೆ ಇಂದಿನಿಂದ ತಾಲೀಮು ಆರಂಭಿಸಿವೆ. ಕಾಡಿನಿಂದ ನಾಡಿಗೆ ಆಗಮಿಸಿರುವ ಗಜಪಡೆ ವಿಶ್ವ ಆನೆಗಳ ದಿನವೇ ತಾಲೀಮು ಆರಂಭವಾಗಿರುವುದು ವಿಶೇಷವೆನಿಸಿದೆ. ಕ್ಯಾಪ್ಟನ್ ಅಭಿಮನ್ಯು ನೇತೃತ್ವದ ೯ ಆನೆಗಳೂ ತಾಲೀಮಿನಲ್ಲಿ ಭಾಗಿಯಾಗಿ, ಅರಮನೆ ಆವರಣದಿಂದ ಹೊರಟು ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಅರಮನೆಗೆ ವಾಪಸ್ ಆಗಿವೆ. ಮೊದಲ ಹಂತದಲ್ಲಿ ಸಾಮಾನ್ಯ ತಾಲೀಮು ನಡೆಸಲಾಗಿದ್ದು, ಕೆಲವು ದಿನಗಳ ಬಳಿಕ ಮರಳಿನ ಮೂಟೆ ಹೊತ್ತು ತಾಲೀಮು ನಡೆಸಲಾಗುತ್ತದೆ. ದಸರಾ ಸಮೀಪಿಸುತ್ತಿದ್ದಂತೆ ಮರದ ಅಂಬಾರಿ ತಾಲೀಮು ನಡೆಸಲಾಗುತ್ತದೆ.

**********

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಾಲ ಪಡೆಯದ ಅಡಿಕೆ ಹಾಗೂ ಕಾಳುಮೆಣಸು ತೋಟಗಾರಿಕಾ ರೈತರು, ಬೆಳೆ ವಿಮೆಗಾಗಿ ನೋಂದಣಿ ಮಾಡಿಕೊಳ್ಳಲು ನಾಡಿದ್ದು ಕೊನೆಯ ದಿನವಾಗಿದೆ. ಸಾಲ ಪಡೆದ ರೈತರಿಗೆ ಇದೇ ೩೦ ಕೊನೆಯ ದಿನವಾಗಿದೆ. ಬ್ಯಾಂಕ್, ಸಾಮಾನ್ಯ ಸೇವಾ ಕೇಂದ್ರ ಮತ್ತು ಗ್ರಾಮ ಜನ್‌ಗಳ ಮೂಲಕವೂ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ. ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಗಾಗಿ ಸರ್ಕಾರ ಜಾರಿಗೊಳಿಸಿದೆ. ಈ ಯೋಜನೆಯಡಿ ಅಡಿಕೆ ಹಾಗೂ ಕಾಳುಮೆಣಸು ಬೆಳೆಗಳಿಗೆ ರೈತರು ಪಾವತಿಸಬೇಕಾದ ಪ್ರೀಮಿಯಂ ಮೊತ್ತ ಪ್ರತಿ ಹೆಕ್ಟೇರಿಗೆ ಕ್ರಮವಾಗಿ ರೂ.೬೪೦೦ ಹಾಗೂ ರೂ.೨೩೫೦ ಆಗಿರುತ್ತದೆ.

**********

ನಶೆ ಮುಕ್ತ ಭಾರತ ನಿರ್ಮಾಣದಲ್ಲಿ ಯುವ ಜನಾಂಗದ ಪಾತ್ರ ಅತೀ ಮುಖ್ಯವಾಗಿದ್ದು, ಎಲ್ಲರೂ ಕೈ ಜೋಡಿಸಿ ಆರೋಗ್ಯ ಪೂರ್ಣ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕೆಂದು ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ ಹೇಳಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿಂದು ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಯುವ ಸೌರಭ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನಶೆ ಮುಕ್ತ ಭಾರತ ನಿರ್ಮಾಣಕ್ಕೆ ಮುಂದಾಗಿದ್ದು, ಇದಕ್ಕೆ ಎಲ್ಲರೂ ಸ್ಪಂದಿಸಬೇಕು ಎಂದು ಹೇಳಿದರು.

**********

ಮಂಗಳೂರಿನಲ್ಲಿ ಪರಿಸರಸ್ನೇಹಿ ಗಣೇಶ ಚತುರ್ಥಿ ಆಚರಿಸಬೇಕೆಂದು ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ತಿಳಿಸಿದ್ದಾರೆ.ಪ್ಲಾಸ್ಟರ್ ಆಫ್ ಪ್ಯಾರಿಸ್ ಅಥವಾ ಬಣ್ಣ ಲೇಪಿತ ವಿಗ್ರಹಗಳನ್ನು ಬಳಸದೆ ದೂರವಿರಬೇಕು. ಇಂತಹ ವಿಗ್ರಹಗಳನ್ನು ಯಾವುದೇ ನದಿ,ಕಾಲುವೆ, ಬಾವಿಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ ಅವರು ತಿಳಿಸಿದ್ದಾರೆ.

**********

ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಆಯೋಜಿಸಿರುವ ಪ್ರತಿಷ್ಠಿತ ಮಹಾರಾಜ ಟ್ರೋಫಿ-೨೦೨೫ರ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಎರಡನೇ ದಿನವಾದ ಇಂದು ಎರಡು ಪಂದ್ಯಗಳು ನಡೆಯಲಿವೆ. ಮೈಸೂರಿನ ಮಾನಸಗಂಗೋತ್ರಿಯ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರೀಡಾಂಗಣದಲ್ಲಿ ಮಧ್ಯಾಹ್ನ ೩.೧೫ಕ್ಕೆ ಹುಬ್ಬಳ್ಳಿ ಟೈಗರ್ಸ್-ಶಿವಮೊಗ್ಗ ಲಯನ್ಸ್ ವಿರುದ್ಧ ಆಡಲಿದೆ. ಸಂಜೆ ೭.೧೫ಕ್ಕೆ ಇದೇ ಮೈದಾನದಲ್ಲಿ ನಡೆಯುವ ಎರಡನೇ ಪಂದ್ಯದಲ್ಲಿ ಮೈಸೂರು ವಾರಿಯರ್ಸ್ ತಂಡ ಗುಲ್ಬರ್ಗ ಮಿಸ್ಟಿಕ್ಸ್ ತಂಡವನ್ನು ಎದುರಿಸಲಿದೆ.

******END*****